# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : (2420+2404)242 |
| **ಸದಸ್ಯರ ಹೆಸರು** | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) ಮತ್ತು ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸುವವರು** | : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| **ಉತ್ತರಿಸಬೇಕಾದ ದಿನಾಂಕ** | : 27.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಂಗನವಾಡಿ ನೌಕರರು ತಮ್ಮ ತಿಂಗಳ ಗೌರವಧನವನ್ನು ರೂ.15 ಸಾವಿರಕ್ಕೆ ಹೆಚ್ಚಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಇತ್ತೀಚೆಗೆ ಬೃಹತ್ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಸಂಖ್ಯೆ ಎಷ್ಟು; ಪ್ರಸ್ತುತ ಅವರಿಗೆ ನೀಡುತ್ತಿರುವ ಗೌರವಧನದ ಮತ್ತು ಇತರೆ ಎಲ್ಲಾ ಸೌಲಭ್ಯಗಳ ವಿವರಗಳೇನು; | ಪ್ರಸ್ತುತ ರಾಜ್ಯದಲ್ಲಿ 56979 ಅಂಗನವಾಡಿ ಕಾರ್ಯಕರ್ತೆಯರು ಮತ್ತು 60241 ಅಂಗನವಾಡಿ ಸಹಾಯಕಿಯರು ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಅವರ ಸೇವಾ ಆಧಾರದ ಮೇಲೆ ಕಾರ್ಯಕರ್ತೆಯರಿಗೆ ಮಾಸಿಕ ಗೌರವಧನ ರೂ.12,000-12,500 ಹಾಗೂ ಸಹಾಯಕಿಯರಿಗೆ ಮಾಸಿಕ ಗೌರವಧನ ರೂ.7000-7,500 ಗಳನ್ನು ಪಾವತಿಸಲಾಗುತ್ತಿದ್ದು, ವಿವರ ಈ ಕೆಳಕಂಡಂತಿದೆ. |

| ವಿವರ | ಕೇಂದ್ರ ಸರ್ಕಾರದ ನಿಗದಿತ ಗೌರವಧನ (60:40) | ಕೇಂದ್ರದ ಪಾಲು (60%) | ರಾಜ್ಯದ ಪಾಲು (40%) | **ರಾಜ್ಯ ಸರ್ಕಾರದ ಹೆಚ್ಚುವರಿ ಗೌರವಧನ** | ಒಟ್ಟು | ಒಟ್ಟಾರೆ ಗೌರವಧನ ಸೇವಾಹಿರಿತನ ಒಳಗೊಂಡಂತೆ: 0-10 ವರ್ಷ ಸೇವಾವಧಿ (ರೂ.1000/-) | 10-20 ವರ್ಷಗಳ ಸೇವಾವಧಿ (ರೂ.1250/-) | 20 ವರ್ಷಗಳಿಗಿಂತ ಮೇಲ್ಪಟ್ಟು (ರೂ.1500/-) |
|---|---|---|---|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 4500 | 2700 | 1800 | **6500** | 11000 | 12000 | 12250 | 12500 |
| ಅಂಗನವಾಡಿ ಸಹಾಯಕಿ | 2250 | 1350 | 900 | **3750** | 6000 | 7000 | 7250 | 7500 |

ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಪಾವತಿಸುತ್ತಿರುವ ಗೌರವಧನವು ದೇಶದಲ್ಲಿ 4ನೇ ಸ್ಥಾನದಲ್ಲಿರುತ್ತದೆ.

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಗೌರವಧನದ ಜೊತೆಗೆ ಈ ಕೆಳಗಿನ ಸೌಲಭ್ಯಗಳನ್ನು ನೀಡಲಾಗುತ್ತಿದೆ.

- ಪೋಷಣ್ ಅಭಿಯಾನ್ ಯೋಜನೆಯಡಿ ನಿಯತಾಂಕಗಳನ್ನು ಪೋಷಣ್ ಟ್ರ್ಯಾಕರ್‌ನಲ್ಲಿ ಅಳವಡಿಸಿದ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಪ್ರತಿ ಮಾಹೆ ರೂ.250/-ರಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.
- ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಗುರುತರ ಖಾಯಿಲೆಗಳಿಗೆ ವೈದ್ಯಕೀಯ ಮರುಪಾವತಿಯಾಗಿ ಗರಿಷ್ಟ ರೂ.50,000/- ಗಳನ್ನು ನೀಡಲಾಗುತ್ತಿದೆ.

| | | |
|---|---|---|
| | | • ಕರ್ತವ್ಯನಿರತರಾಗಿದ್ದು, ಮರಣ ಹೊಂದಿದ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ರೂ.50,000/- ಗಳ ಮರಣ ಪರಿಹಾರವನ್ನು ನೀಡಲಾಗುತ್ತಿದೆ.<br><br>• ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೋಂದಣಿಯಾದ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಕ್ರಮವಾಗಿ ಮಾಸಿಕ ಗೌರವಧನದಲ್ಲಿ ರೂ.150/- ಹಾಗೂ ಸಹಾಯಕಿಯರಿಗೆ ರೂ.84/- ಗಳ ವಂತಿಗೆಯೊಂದಿಗೆ ಅಷ್ಟೇ ಪ್ರಮಾಣದ ಸರ್ಕಾರದ ವಂತಿಗೆಯನ್ನೂ ಸೇರಿಸಿ ಪಾವತಿಸಲಾಗುತ್ತಿದ್ದು, ನಿವೃತ್ತಿ ನಂತರದಲ್ಲಿ ಎನ್.ಪಿ.ಎಸ್. ಲೈಟ್ ಯೋಜನೆಯಡಿ ನಿವೃತ್ತಿ ಉಪಧನ ನೀಡಲಾಗುತ್ತಿದೆ.<br><br>• ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾಗಿ ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಅನುಕ್ರಮವಾಗಿ ರೂ.50,000/- ಮತ್ತು ರೂ.30,000/- ಗಳನ್ನು ಇಡಿಗಂಟು ಯೋಜನೆಯಡಿ ಪಾವತಿಸಲಾಗುತ್ತಿದೆ.<br><br>• ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ 180 ದಿನಗಳ ಹೆರಿಗೆ ರಜೆ ಸೌಲಭ್ಯವನ್ನು ನೀಡಲಾಗುತ್ತಿದೆ.<br><br>• ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭಿಮಾ ಯೋಜನೆ (PMJJBY) ಯಡಿ 18-50 ವರ್ಷದ ವಯೋಮಾನದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ 2023-24 ನೇ ಸಾಲಿನಲ್ಲಿ ವಾರ್ಷಿಕ ವಂತಿಗೆಯಾಗಿ ರೂ.436/- ಗಳನ್ನು ಆರ್ಥಿಕ ವಿಮೆ ಸೌಲಭ್ಯವನ್ನು ಒದಗಿಸುತ್ತಿದ್ದು, ಮರಣ ಹೊಂದಿದಲ್ಲಿ ರೂ.2.00 ಲಕ್ಷಗಳನ್ನು ಕ್ಲೈಮ್ಸ್ ಮುಖೇನ ಸೌಲಭ್ಯವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br><br>• ಪ್ರಧಾನಮಂತ್ರಿ ಸುರಕ್ಷಾ ಭಿಮಾ ಯೋಜನೆಯಡಿ (PMSBY) 18-59 ವರ್ಷದ ವಯೋಮಾನದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ರೂ.20/- ಗಳನ್ನು ವಾರ್ಷಿಕ ವಂತಿಗೆಯಾಗಿ ಪಾವತಿಸಲಾಗುತ್ತಿದ್ದು, ಅಪಘಾತ ಹೊಂದಿ, ಮರಣ ಹೊಂದಿದರೆ ರೂ.2.00 ಲಕ್ಷಗಳವರೆಗೂ Life coverage ಇರುತ್ತದೆ ಮತ್ತು ಅಪಘಾತದಲ್ಲಿ ಭಾಗಶ: ಶಾಶ್ವತ ಅಂಗವಿಕಲತೆ ಹೊಂದಿದಲ್ಲಿ ರೂ.1.00 ಲಕ್ಷ ಕ್ಲೈಮ್ಸ್ ಮುಖೇನ ಸೌಲಭ್ಯವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಮಮಇ 190 ಐಸಿಡಿ 2021, ದಿನಾಂಕ:05.03.2022 ರಲ್ಲಿ ಸೂಚಿಸಿರುವಂತೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಮೃತಪಟ್ಟಲ್ಲಿ ಅನುಕಂಪದ ಆಧಾರದಲ್ಲಿ ಮಗಳು ಅಥವಾ ಸೊಸೆ ಇಬ್ಬರಲ್ಲಿ ಒಬ್ಬರಿಗೆ ಅನುಕಂಪದ ಆಧಾರದ ಆಯ್ಕೆಗೆ ಅವಕಾಶ ಕಲ್ಪಿಸಲಾಗಿದೆ. |
| ಇ) | ಅಂಗನವಾಡಿ ನೌಕರರುಗಳ ತಿಂಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸುವುದು, ನಿವೃತ್ತಿ ಪರಿಹಾರ ಧನವನ್ನು ಹೆಚ್ಚಿಸುವುದು ಸೇರಿದಂತೆ ನಿವೃತ್ತರಿಗೆ ಸುಪ್ರೀಂಕೋರ್ಟ್ ಆದೇಶದಂತೆ ಗ್ರ್ಯಾಚ್ಯುಟಿ (ಉಪಧನ) ಹಣವನ್ನು ನೀಡುವ ಕುರಿತು ಸರ್ಕಾರ ಇದುವರೆಗೆ ಯಾವುದೇ ಕ್ರಮವಹಿಸದೆ ದೀರ್ಘಕಾಲದಿಂದ ನಿರ್ಲಕ್ಷ್ಯ ತೋರುತ್ತಿರಲು ಕಾರಣಗಳೇನು; | 2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.1000/- ಹಾಗೂ ಅಂಗನವಾಡಿ ಸಹಾಯಕಿಯರಿಗೆ ರೂ.750/- ಗಳನ್ನು ಹೆಚ್ಚಿಸಿ ಪಾವತಿಸಲಾಗುತ್ತಿದೆ.<br><br>ಸರ್ಕಾರದ ಆದೇಶದ ಸಂಖ್ಯೆ: ಮಮಇ 14 ಐಸಿಡಿ 2023, ದಿ:04.02.2023 ರಲ್ಲಿ 2023-24ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ನಿವೃತ್ತಿಯಾದ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ ಗ್ರಾಚ್ಯುಟಿ ಪಾವತಿಸಲು ಆದೇಶಿಸಲಾಗಿರುತ್ತದೆ. ಅದರಂತೆ 2023-24ನೇ ಸಾಲಿನಲ್ಲಿ ಹಾಗೂ 2024-25ನೇ ಸಾಲಿನಲ್ಲಿ ನಿವೃತ್ತಿಯಾದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಗ್ರಾಚ್ಯುಟಿ ಮೊತ್ತ ಪಾವತಿಸಲಾಗಿದೆ |
| ಈ) | ಸರ್ಕಾರದ ಯೋಜನೆಗಳನ್ನು ಬೇರು ಮಟ್ಟದಲ್ಲಿ ಜನರಿಗೆ ತಲುಪಿಸುವ ಗುರುತರ | |

| | |
|---|---|
| ಹೊಣೆಯನ್ನು ಹೊತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸುವುದರ ಜೊತೆಗೆ ನಿವೃತ್ತರಿಗೆ ಸುಪ್ರೀಂಕೋರ್ಟ್ ಆದೇಶದಂತೆ ಗ್ರ್ಯಾಚ್ಯುಟಿ (ಉಪಧನ) ಹಣವನ್ನು ನೀಡಲು ಯಾವ ಕಾಲಮಿತಿಯೊಳಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದು? | |

**ಸಂಖ್ಯೆ: ಮಮಇ 107 ಐಸಿಡಿ 2026**

**(ಲಕ್ಷ್ಮಿ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು